A-PDF Merger DEMO : Purchase from www.A-PDF.com to remove the watermark

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ನ್ಯಾಯಾಲಯಗಳಲ್ಲಿ ದಾಖಲಾಗಿರುವ/ದಾಖಲಾಗುವ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಬಗ್ಗೆ.

**ಓದಲಾಗಿದೆ:** ಅರೆ ಸರ್ಕಾರಿ ಪತ್ರ ಸಂಖ್ಯೆ: ಲಾ 180 ಎಲ್‌ಎಜಿ 2012, ದಿನಾಂಕ:24-09-2012

****

**ಪ್ರಸ್ತಾವನೆ:**

ಮೇಲೆ ಓದಲಾದ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಇವರ ಅರೆ ಸರ್ಕಾರಿ ಪತ್ರದಲ್ಲಿ ಮಾನ್ಯ ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ನ್ಯಾಯಾಲಯದ ಪ್ರಕರಣಗಳನ್ನು ಇತ್ಯರ್ಥಪಡಿಸುವ ಬಗ್ಗೆ ದಿನಾಂಕ: 05-06-2012ರಂದು ನಡೆದ ಸಭೆಯಲ್ಲಿ ಸಚಿವಾಲಯದ ಎಲ್ಲಾ ಇಲಾಖೆಗಳಲ್ಲೂ ಉಪಕಾರ್ಯದರ್ಶಿ ಶ್ರೇಣಿಗಿಂತ ಕಡಿಮೆ ಇಲ್ಲದ ಒಬ್ಬ ಅಧಿಕಾರಿಯನ್ನು ನೋಡಲ್ ಅಧಿಕಾರಿಯಾಗಿ ನೇಮಿಸಿ "ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಪ್ರತಿ ತಿಂಗಳು ಮೊದಲನೇ ಶನಿವಾರ ಆಯಾ ಇಲಾಖೆಗೆ ಸಂಬಂಧಪಟ್ಟ ಸರ್ಕಾರಿ ವಕೀಲರುಗಳೊಡನೆ ನ್ಯಾಯಾಲಯಗಳ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಪುನರ್‌ವಿಮರ್ಶಿಸುವ ಸಲುವಾಗಿ ಸಭೆಯನ್ನು ಏರ್ಪಡಿಸುವುದು. ಸಭೆಯ ನಡವಳಿಯನ್ನು ಕಾನೂನು ಇಲಾಖೆಯ ಪ್ರಧಾನ ಕಾರ್ಯದರ್ಶಿಯವರಿಗೆ ಕಳುಹಿಸಿಕೊಡುವುದು" ಎಂದು ತೀರ್ಮಾನಿಸಲಾಗಿದೆ.

ಅದರಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ ಸಕಇ 53 ಸಮನ್ವಯ 2013,**
**ಬೆಂಗಳೂರು, ದಿನಾಂಕ: 08.10.2013**

ಪ್ರಸ್ತಾವನೆಯಲ್ಲಿ ವಿವರಿಸಲಾದ ಕಾರಣಗಳ ಹಿನ್ನೆಲೆಯಲ್ಲಿ ನ್ಯಾಯಾಲಯಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸಂಬಂದಿಸಿದಂತೆ ದಾಖಲಾಗಿರುವ/ದಾಖಲಾಗುವ ಪ್ರಕರಣಗಳ ಶೀಘ್ರ ಇತ್ಯರ್ಥಕ್ಕಾಗಿ ಇಲಾಖೆಯಲ್ಲಿ ಪ್ರತಿ ತಿಂಗಳು ಮೊದಲನೇ ಶನಿವಾರ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನ್ಯಾಯಾಲಯ ಪ್ರಕರಣಗಳ ಪುನರ್‌ಪರಿಶೀಲನಾ ಸಭೆಯನ್ನು ಸಂಬಂಧಪಟ್ಟ ಸರ್ಕಾರಿ ವಕೀಲರೊಡನೆ ಜರುಗಿಸಿ ಸಭೆ ನಡವಳಿಗಳ ಬಗ್ಗೆ ಕ್ರಮವಹಿಸುವ ಕುರಿತು ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಉಪ ಕಾರ್ಯದರ್ಶಿ-2 ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಈ ಕುರಿತು ಪ್ರತಿ ತಿಂಗಳು ನಡೆದ ಸಭೆಯ ನಡವಳಿಗಳನ್ನು ಕಾನೂನು ಇಲಾಖೆಗೆ ಕಳುಹಿಸತಕ್ಕದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ, ಪ್ರಧಾನ ಕಾರ್ಯದರ್ಶಿಗಳು, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ, ವಿಧಾನಸೌಧ, ಬೆಂಗಳೂರು.

—

4. ಅಡ್ವೋಕೇಟ್ ಜನರಲ್, ಹೈಕೋರ್ಟ್ ಉಚ್ಚ ನ್ಯಾಯಾಲಯ, ಬೆಂಗಳೂರು. (ಇವರು ಇಲಾಖೆ ಸಂಬಂಧಿಸಿದ ಸರ್ಕಾರಿ ವಕೀಲರನ್ನು ಮಾಹಿತಿಯೊಂದಿಗೆ ಸಭೆಗೆ ಹಾಜರಾಗುವಂತೆ ಸೂಚಿಸಲು ಕೋರಿದೆ)
5. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಸಕಾರದ ಉಪ ಕಾರ್ಯದರ್ಶಿಗಳು 1 & 2 ,ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿಗಳು 1&2, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
9. ಶಾಖಾಧಿಕಾರಿಗಳು ಎ.ಬಿ & ಸ್ವೀಮರ ಶಾಖೆ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
10. ಶಾಖಾ / ರಕ್ಷಾ ಕಡತ
11. ಹೆಚ್ಚುವರಿ ಪ್ರತಿಗಳು